ಮೈಸೂರಿನಲ್ಲಿ ಕುಡಿಯುವ ನೀರಿನ ಯೋಜನೆಗಳಿಗೆ ಬಿಡುಗಡೆಯಾದ ಹಣ.

952-ಶ್ರೀ ಕೆ. ಹರ್ಷಕುಮಾರ ಗೌಡ (ಚಾಮರಾಜ) : ಮಾನ್ಯ ನಗರಾಭಿವೃದ್ಧಿ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಕುಡಿಯುವ ನೀರಿನ ಯೋಜನೆಗಳಿಗೆ ಸರ್ಕಾರವು 1992-93ನೇ ಸಾಲಿನಲ್ಲಿ ಬಿಡುಗಡೆ ಮಾಡಿರುವ ಹಣವೆಷ್ಟು?

ಆ) ಮೈಸೂರು ನಗರಕ್ಕೆ ಬಿಡುಗಡೆ ಮಾಡಿರುವ ಹಣವೆಷ್ಟು?

ಇ) ಕುಡಿಯುವ ನೀರಿನ ಯೋಜನೆಗಳು ಸಂಪೂರ್ಣಗೊಳ್ಳಲು ಬೇಕಾಗುವ ಕಾಲಾವಧಿಯೆಷ್ಟು?

ಶ್ರೀ ಚೌಡರೆಡ್ಡಿ (ನಗರಾಭಿವೃದ್ಧಿ ಸಚಿವರು) :

ಅ) ರೂ. 2,357.82 ಲಕ್ಷಗಳು (ನವೆಂಬರ್ 1992ರ ಅಂತ್ಯದವರೆಗೆ)

ಆ) ರೂ. 169.67 ಲಕ್ಷಗಳು.

ಇ) 3ರಿಂದ 5 ವರ್ಷಗಳು.

ಹುಕ್ಕೇರಿ ಪಟ್ಟಣಕ್ಕೆ ಕುಡಿಯುವ ನೀರಿನ ಯೋಜನೆ

970-ಶ್ರೀ ಉಮೇಶ ವಿ. ಕತ್ತಿ (ಹುಕ್ಕೇರಿ) : ಮಾನ್ಯ ನಗರಾಭಿವೃದ್ಧಿ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಕ್ಕೇರಿ ಪಟ್ಟಣದ ಕುಡಿಯುವ ನೀರಿನ ಯೋಜನೆ ಮಂಜೂರಾಗಿ ಎರಡು ವರ್ಷಗಳಾಗಿದ್ದರೂ ಇದುವರೆವಿಗೂ ಹುಕ್ಕೇರಿ ಪಟ್ಟಣಕ್ಕೆ ನೀರು ದೊರೆಯದಿರಲು ಕಾರಣವೇನು?

ಆ) ಅದನ್ನು ಯಾವಾಗ ಪೂರೈಸಲಾಗುವುದು ಹಾಗೂ ವಿಳಂಬಕ್ಕೆ ಕಾರಣವೇನು?

ಇ) ಅದಕ್ಕೆ ಸಂಬಂಧಿಸಿದ ಅಧಿಕಾರಿಗಳ ಮೇಲೆ ಏನು ಕ್ರಮ ಕೈಗೊಳ್ಳಲಾಗಿದೆ ಹಾಗೂ ಇಲ್ಲಿಯವರೆಗೆ ಯೋಜನೆಗೆ ವೆಚ್ಚವಾದ ಹಣವೆಷ್ಟು?

ಶ್ರೀ ಚೌಡರೆಡ್ಡಿ (ನಗರಾಭಿವೃದ್ಧಿ ಸಚಿವರು) :

ಅ) ಈ ಯೋಜನೆಯನ್ನು ದಿನಾಂಕ 16-12-92 ರಂದು ಚಾಲ್ತಿ ಮಾಡಲಾಗಿದೆ. ಈ ಪಟ್ಟಣಕ್ಕೆ ದಿನಾಂಕ 29-12-92ರಂದು ನೀರು ಸರರಾಜು ಮಾಡಲಾಗುತ್ತಿದೆ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ. ಈ ಯೋಜನೆಗೆ ರೂ. 45.60 ಲಕ್ಷಗಳು ಖರ್ಚಾಗಿದೆ.

ಹುಕ್ಕೇರಿ ತಾಲ್ಲೂಕಿನಲ್ಲಿ ಆಶ್ರಯ ಯೋಜನೆಯಡಿಯಲ್ಲಿ ಮಂಜೂರಾದ ಮನೆಗಳು

972 - ಶ್ರೀ ಉಮೇಶ್ ವಿ. ಕತ್ತಿ (ಹುಕ್ಕೇರಿ) : ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನಲ್ಲಿ ಆಶ್ರಯ ಯೋಜನೆಯಡಿಯಲ್ಲಿ ಮಂಜೂರಾದ ಮನೆಗಳೆಷ್ಟು?

ಆ) ಆ ಮನೆಗಳನ್ನು ಕಟ್ಟಲು ಯಾರಿಗೆ ಗುತ್ತಿಗೆ ಕೊಡಲಾಗಿದೆ?